# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1532

ಸದಸ್ಯರ ಹೆಸರು : ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 19.12.2025

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಗ್ರಾಮ ಪಂಚಾಯಿತಿ ಚುನಾವಣೆಗೆ ಅಗತ್ಯವಿರುವ ಮೀಸಲಾತಿ ಪಟ್ಟಿ (Reservation List) ಸಿದ್ಧತೆ ಮತ್ತು ಅಂತಿಮೀಕರಣ ಪ್ರಕ್ರಿಯೆಯನ್ನು ಸರ್ಕಾರ ಪೂರ್ಣಗೊಳಿಸಿರುವುದೇ; ಪೂರ್ಣಗೊಳಿಸದಿದ್ದರೆ ವಿಳಂಬಕ್ಕೆ ಕಾರಣವೇನು; | 1. ರಾಜ್ಯದ ಗ್ರಾಮ ಪಂಚಾಯತಿಗಳಿಗೆ ಡಿಸೆಂಬರ್ 2020 ರಲ್ಲಿ ಸದಸ್ಯ ಸ್ಥಾನಗಳಿಗೆ ಚುನಾವಣೆ ನಡೆಸಲಾಗಿರುತ್ತದೆ. ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಹುದ್ದೆಗಳಿಗೆ ಜನವರಿ-ಫೆಬ್ರುವರಿ 2021 ರಲ್ಲಿ ಚುನಾವಣೆ ನಡೆಸಿ ಆಯ್ಕೆ ಮಾಡಲಾಗಿದ್ದು, ಈ ಅವಧಿಯು ಜನವರಿ- ಫೆಬ್ರುವರಿ 2026 ರವರೆಗೆ ಇರುತ್ತದೆ.<br>2. ಗ್ರಾಮ ಪಂಚಾಯತಿಗಳಿಗೆ ಮೀಸಲಾತಿಯನ್ನು ನಿಗಧಿಪಡಿಸಿ ಅಧಿಸೂಚನೆಯನ್ನು ರಾಜ್ಯ ಚುನಾವಣಾ ಆಯೋಗಕ್ಕೆ ಒದಗಿಸುವಂತೆ ಸರ್ಕಾರದ ವಿರುದ್ಧ ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ 33211/2025(PIL) ದಾಖಲಿಸಿದ್ದು, ಪ್ರಕರಣವು ದಿನಾಂಕ:11.12.2025 ರಂದು ವಿಚಾರಣೆಗೆ ಬಂದಿದ್ದು, ಮುಂದಿನ ವಿಚಾರಣೆಯನ್ನು ದಿನಾಂಕ:28.01.2026ಕ್ಕೆ ನಿಗಧಿಪಡಿಸಿರುತ್ತದೆ. |
| (ಆ) | ಗ್ರಾಮ ಪಂಚಾಯಿತಿ ಚುನಾವಣೆಗಳಿಗೆ ಸಂಬಂಧಿಸಿದಂತೆ ವಾರ್ಡ್ ಮರುವ್ಯವಸ್ಥೆ (Delimitation) ಕಾರ್ಯವನ್ನು ಸರ್ಕಾರವು ಯಾವ ಹಂತದಲ್ಲಿ ನಡೆಸುತ್ತಿದೆ; (ಜಿಲ್ಲಾವಾರು ಪ್ರಗತಿ ವರದಿ ಸಲ್ಲಿಸುವುದು) | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 4ರನ್ವಯ ಪ್ರತಿ 400 ಜನಸಂಖ್ಯೆಗೆ ಒಬ್ಬ ಸದಸ್ಯರನ್ನು ನಿಗಧಿಪಡಿಸಲು, ಪ್ರಕರಣ 5(5) ರನ್ವಯ ಗ್ರಾಮ ಪಂಚಾಯಿತಿಗೆ ಪ್ರತಿಯೊಂದು ಚುನಾವಣಾ ಕ್ಷೇತ್ರಕ್ಕೂ ಎಷ್ಟು ಸ್ಥಾನಗಳನ್ನು ಅಂದರೆ ಒಂದು ಅಥವಾ ಅದಕ್ಕೂ ಹೆಚ್ಚಿನ ಸ್ಥಾನಗಳನ್ನು ಹಂಚಿಕೆ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಅದರಂತೆ ಗ್ರಾಮ ಪಂಚಾಯಿತಿ ಚುನಾವಣೆಗಳಿಗೆ ಚುನಾವಣಾ ಕ್ಷೇತ್ರಗಳನ್ನು ಹಂಚಿಕೆ ಮಾಡಲು ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಕ್ರಮ ಕೈಗೊಳ್ಳಬೇಕಾಗಿರುತ್ತದೆ. |
| (ಇ) | ಮೀಸಲಾತಿ ಪಟ್ಟಿ ಮತ್ತು ಮರುವ್ಯವಸ್ಥೆ ಪ್ರಕ್ರಿಯೆಗಳ ವಿಳಂಬದಿಂದಾಗಿ ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಅಭಿವೃದ್ಧಿ ಯೋಜನೆಗಳ ಮೇಲೆ ಪರಿಣಾಮ ಬೀರುವ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ; ಇದನ್ನು ತ್ವರಿತಗೊಳಿಸಲು ಏನು ಕ್ರಮಗಳನ್ನು ಕೈಗೊಳ್ಳಲಾಗಿದೆ? | ಇಲ್ಲ. |

**ಸಂಖ್ಯೆ:** ಗ್ರಾಅಪ 1027 ಗ್ರಾಪಂಅ 2025

**(ಪ್ರಿಯಾಂಕ್ ಖರ್ಗೆ)**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು